ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**Akkamahadevi Women's University, Vijayapura**

ಕುಲಸಚಿವರು (ಮೌಲ್ಯಮಾಪನ) Registrar (Evaluation)

ವಿಜಯಪುರ-586108 Vijayapura-586108

Phone Number: 08352-229123 Fax Number 08352-229023

ಕ್ರ.ಸ :ಕರಾಮವಿವಿ/ಪರೀಕ್ಷಾ/ಮೌ.ಮಾ/2017-18/5649 ದಿನಾಂಕ:18-12-2017

## ಸುತ್ತೋಲೆ

ಡಿಸೆಂಬರ್ – 2017 ರಲ್ಲಿ ಜರುಗಿದ ಸ್ನಾತಕ ಪದವಿಯ ಅರ್ಥಶಾಸ್ತ್ರ ವಿಷಯದ ಮೌಲ್ಯಮಾಪಕರನ್ನು ನೇಮಿಸಿದ್ದು ದಿನಾಂಕ: 22.12.2017 ರಂದು ಬೆಳಿಗ್ಗೆ 10 ಗಂಟೆಗೆ ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗದಲ್ಲಿ ಜರುಗುವ ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗಲು ಈ ಸುತ್ತೋಲೆಯ ಮೂಲಕ ತಿಳಿಸಲಾಗಿದೆ.

ಡಾ. ಅರುಣ.ಡಿ.ಕುಲಕರ್ಣಿ, ಶ್ರೀಮತಿ.ಎ.ಎ.ಪಾಟೀಲ ಮಹಿಳಾ ಕಾಲೇಜು, ಚಿಕ್ಕೋಡಿ ಇವರನ್ನು ಅರ್ಥಶಾಸ್ತ್ರ ವಿಷಯದ ಮೌಲ್ಯಮಾಪನ ಕಾರ್ಯದ ಚೇರಮನ್ನರಾಗಿ ನೇಮಕ ಮಾಡಿದ್ದು ಹೆಚ್ಚಿನ ಮಾಹಿತಿಗಾಗಿ ಮೌಲ್ಯಮಾಪಕರು ಇವರನ್ನು ಸಂಪರ್ಕಿಸಬಹುದಾಗಿದೆ.

**ಸೂಚನೆಗಳು:**

1. ಈ ಯಾದಿಯಲ್ಲಿ ಅನುದಾನ ರಹಿತ ಹಾಗೂ ಸರ್ಕಾರಿ ಮಹಾವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಅಥವಾ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಹೆಸರುಗಳು ಇರದಿದ್ದಲ್ಲಿ ಮೌಲ್ಯಮಾಪನ ಕಾರ್ಯಕ್ಕೆ ನೇರವಾಗಿ ಹಾಜರಾಗಬಾರದು. ಅವಶ್ಯಕತೆ ಇದ್ದಲ್ಲಿ ತಿಳಿಸಲಾಗುವುದು.
2. ಯಾದಿಯಲ್ಲಿರುವ ಮೌಲ್ಯಮಾಪಕರುಗಳಿಗೆ ಮೌಲ್ಯಮಾಪನ ನೇಮಕಾತಿ ಆದೇಶ ಪತ್ರವನ್ನು ನೇರವಾಗಿ ಪರೀಕ್ಷಾ ವಿಭಾಗದಲ್ಲಿ ನೀಡಲಾಗುವುದು.
3. ಈಗಾಗಲೇ ಬಾಹ್ಯ ಪರೀಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ಬಿಡುಗಡೆ ಪತ್ರ ತರಬೇಕು. ಹಾಗೂ ಬಿಡುಗಡೆಗೊಳಿಸಿದ ಪ್ರಾಚಾರ್ಯರು ನೇರವಾಗಿ ಕುಲಸಚಿವರು (ಮೌ) ಕಾರ್ಯಾಲಯಕ್ಕೆ ಬಿಡುಗಡೆ ಪತ್ರದ ಪ್ರತಿ ಕಳುಹಿಸಿಕೊಡಬೇಕು.
4. ತಾವು ಕಾರ್ಯ ನಿರ್ವಹಿಸುತ್ತಿರುವ ಮಾತೃ ಸಂಸ್ಥೆಯ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕೃತ ಗುರುತಿನ ಪತ್ರ, ಸೇವಾ ಪ್ರಮಾಣ ಪತ್ರ ಹಾಗೂ ಯು.ಜಿ.ಸಿ/ನಾನ್ ಯು.ಜಿ.ಸಿ ಪ್ರಮಾಣ ಪತ್ರ ಕಡ್ಡಾಯವಾಗಿ ಸಲ್ಲಿಸುವುದು.
5. ಒಂದು ವೇಳೆ ಅರೇಕಾಲಿಕ/ ಅತಿಥಿ ಉಪನ್ಯಾಸಕರನ್ನು ಮೌಲ್ಯಮಾಪನ ಕಾರ್ಯಕ್ಕೆ ಕರೆದಲ್ಲಿ ತಪ್ಪದೇ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕೃತ ಸೇವಾ ಪ್ರಮಾಣ ಪತ್ರವನ್ನು ತರಬೇಕು.
6. ಮೌಲ್ಯಮಾಪನ ಕಾರ್ಯಕ್ಕೆ ಕನಿಷ್ಟ 03 ವರ್ಷಗಳ ಬೋಧನಾ ಅನುಭವ ಇರಬೇಕು. ಸತತವಾಗಿ 03 ವರ್ಷ ಹಾಗೂ ಅದಕ್ಕಿಂತ ಹೆಚ್ಚು ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿಯೇ ಸೇವೆ ಸಲ್ಲಿಸಿದವರು ಮಾತ್ರ ಮೌಲ್ಯಮಾಪನ ಕಾರ್ಯಕ್ಕೆ ಅರ್ಹರು.
7. ಮೌಲ್ಯಮಾಪನ ಕಾರ್ಯಕ್ಕೆ ಒಮ್ಮೆ ಹಾಜರಾಗಿ ಮಧ್ಯದಲ್ಲಿಯೇ ಮೌಲ್ಯಮಾಪನ ಕಾರ್ಯ ಬಿಟ್ಟು ಹೋದರೆ ಯಾವುದೇ ರೀತಿಯ ಸಂಭಾವನೆ ನೀಡುವುದಿಲ್ಲ.